MVC No. 62/2023 PW-1

**ದಿನಾಂಕ 17.07.2025ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು ಃ ಎದುರುದಾರರಾದ ಆರ್ 2 ಪರ ಶ್ರೀ ಎ ಸಿ ಆರ್ ವಕೀಲರಿಂದ ಃ**

ನಾನು ಈಗ ಏನೂ ಕೆಲಸ ಮಾಡುತ್ತಿಲ್ಲ. ಮೊದಲು ಬಿಡದಿಯ ಬಿಸ್ಕತ್ ಫ್ಯಾಕ್ಟರಿಯಲ್ಲಿ ಚಾಲಕನಾಗಿದ್ದೆ . ಸದರಿ ಫ್ಯಾಕ್ಟರಿಯ ಮಾಲೀಕನನ್ನು ಕರೆದು ಸಾಕ್ಷಿ ಮಾಡಿಸಲು ತೊಂದರೆ ಇಲ್ಲ. ಡಿಎಲ್ ಅನ್ನು ಆರ್ ಟಿ ಒ ಗೆ ಶರಣಾಗತಿ ಮಾಡಿಲ್ಲ. ವೈದ್ಯಾಧಿಕಾರಿಯವರು 2 ವರ್ಷ ಬಿಟ್ಟು ಚಾಲನೆ ಮಾಡಬಹುದು ಎಂದು ಹೇಳಿದ್ದಾರೆ. ನಾನು ಚಾಲಕನಾಗಿಲ್ಲ ಎಂದರೆ ಸುಳ್ಳು. ನಾನು ಅಪಘಾತವಾದ ದಿನ ಲಾಲಘಟ್ಟ ಕ್ರಾಸ್ ನಿಂದ ಅಜ್ಜಿ ಮನೆಗೆ ನಡೆದುಕೊಂಡು ಹೋಗುತ್ತಿದ್ದೆ. ಆಗ ಸಮಯ ಸಂಜೆ 5.30 ಗಂಟೆಯಾಗಿತ್ತು. ಹಿಂದುಗಡೆಯಿಂದ ಕಾರು ನನಗೆ ಡಿಕ್ಕಿ ಪಡಿಸಿರುತ್ತದೆ. ಅಪಘಾತವಾದಾಗ ನನಗೆ ಪ್ರಜ್ಞೆ ಇರಲಿಲ್ಲ. ನಾನು ಬಿದ್ದ ತಕ್ಷಣ ಪ್ರಜ್ಞೆ ಹೋಗಿರುತ್ತದೆ. ನಾನು ರಸ್ತೆ ದಾಟಲು ಹೋಗಿ ನನ್ನ ತಪ್ಪಿನಿಂದ ಅಪಘಾತವಾಗಿದೆ ಎಂದರೆ ಸುಳ್ಳು. ನನಗೆ ಕೈ ಕಾಲು, ತೊಡೆಗೆ ಪೆಟ್ಟಾಗಿದೆ. ಈ ಗಾಯಗಳು ಗುಣಮುಖವಾಗಿದೆ ಎಂದರೆ ಸುಳ್ಳು. ಅಪಘಾತವಾದ ಬಗ್ಗೆ ನನ್ನ ತಾಯಿ ದೂರನ್ನು ನೀಡಿರುತ್ತಾರೆ. ದೂರಿನಲ್ಲಿರುವ ವಿಷಯ ಗೊತ್ತಿದೆ. ನಾನು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ನಂತರ ನನಗೆ ಪ್ರಜ್ಞೆ ಬಂದಿರುತ್ತದೆ. ಅಪಘಾತವಾದಾಗ ಸಾರ್ವಜನಿಕ ಸರ್ಕಾರಿ ಆಸ್ಪತ್ರೆ ಚನ್ನಪಟ್ಟಣಗೆ ಚಿಕಿತ್ಸೆಗಾಗಿ ಕರೆದುಕೊಂಡು ಹೋಗಿದ್ದರು ನಂತರ ರಾಮನಗರದ ನಾರಾಯಣ ಆಸ್ಪತ್ರೆಗೆ ಹೋಗಿರುತ್ತೇವೆ. ನನ್ನ ವೈದ್ಯಕೀಯ ಚಿಕಿತ್ಸೆಗಾಗಿ 4 ಲಕ್ಷ ರೂಪಾಯಿ ಹಣ ಖರ್ಚಾಗಿದೆ ಎಂದು ಹೇಳಿದ್ದು ಅದು ಸುಳ್ಳು ಎಂದರೆ ಸುಳ್ಳು. ಆ ಬಗ್ಗೆ ಯಾವುದೇ ದಾಖಲೆಯನ್ನು ಹಾಜರುಪಡಿಸಿಲ್ಲ ಎಂದರೆ ಸುಳ್ಳು. ನನಗೆ ಅಪಘಾತವಾಗುವುದಕ್ಕಿಂತ ಮುಂಚೆ ನಾನು ಚಾಲಕನಾಗಿ ಕೆಲಸ ಮಾಡಿ ತಿಂಗಳಿಗೆ 30 ಸಾವಿರ ಸಂಪಾದನೆ ಮಾಡುತ್ತಿದ್ದೆ ಎಂದು ಹೇಳಿದ್ದು ಆ ರೀತಿ ಹೇಳಿರುವುದು ಸುಳ್ಳು ಎಂದರೆ ಸುಳ್ಳು. ಆ ಬಗ್ಗೆ ದಾಖಲೆಯನ್ನು ಹಾಜರುಪಡಿಸಿಲ್ಲ ಎಂದರೆ ಸುಳ್ಳು. ಅಪಘಾತವಾದಾಗ ನನಗೆ 45-50 ವರ್ಷ ವಯಸ್ಸಾಗಿತ್ತು ಎಂದರೆ ಸಾಕ್ಷಿಯು 357 ವರ್ಷ ವಯಸ್ಸಾಗಿತ್ತು ಎಂದು ನುಡಿಯುತ್ತಾರೆ. ಆಧಾರ್ ಕಾರ್ಡ್ ಅನ್ನು ನ್ಯಾಯಾಲಯಕ್ಕೆ

ಹಾಜರುಪಡಿಸಿದ್ದೇನೆ. ತೊಂದರೆ ಇಲ್ಲ. 4 ದಿನ ತಡವಾಗಿ ದೂರು ನೀಡಿದ್ದೇನೆಂದರೆ ಸಾಕ್ಷಿಯು ನಾನು ಆಸ್ಪತ್ರೆಯಲ್ಲಿದ್ದೆ ಎಂದು ನುಡಿಯುತ್ತಾರೆ. ನನಗೆ ಆರ್ಥಿಕ ನಷ್ಟ ಉಂಟಾಗಿಲ್ಲ ಎಂದರೆ ಸುಳ್ಳು. ಪರಿಹಾರ ಪಡೆಯುವ ಸಲುವಾಗಿ ಸುಳ್ಳು ಅರ್ಜಿ ಹಾಕಿ, ದಾಖಲೆಗಳನ್ನು ಸೃಷ್ಟಿ ಮಾಡಿಕೊಂಡು ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸುಳ್ಳು.

**ಮರುವಿಚಾರಣೆ ಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ ಹೇ ಕೇ ಸ ಒ

**(ವೆಂಕಟೇಶಪ್ಪ. ವಿ)**
**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.**